## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 785 (856)

ಸದಸ್ಯರ ಹೆಸರು : ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 14.07.2023

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕಳೆದ 3 ವರ್ಷಗಳಲ್ಲಿ ಸ್ವಚ್ಛ ಗ್ರಾಮ ಯೋಜನೆಯಡಿ ಎಷ್ಟು ಗ್ರಾಮ ಪಂಚಾಯತ್ ಗಳನ್ನು ಆಯ್ಕೆ ಮಾಡಲಾಗಿದೆ; (ವಿವರ ನೀಡುವುದು) | ಸ್ವಚ್ಛ ಭಾರತ್ (ಗ್ರಾ) ಯೋಜನೆಯ ಹಂತ-2ರ ಮಾರ್ಗಸೂಚಿಯಂತೆ ಕಲಬುರಗಿ ಜಿಲ್ಲೆಯ 261 ಹಾಗೂ ಯಾದಗಿರಿ ಜಿಲ್ಲೆಯ 122 ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ODF Plus ಮಾಡಲು ವಿವಿಧ ಘಟಕಾಂಶಗಳನ್ನು ಅನುಷ್ಠಾನ ಮಾಡಲಾಗುತ್ತಿದೆ. |
| (ಆ) | ಎಷ್ಟು ಗ್ರಾಮ ಪಂಚಾಯತ್ ಗಳಲ್ಲಿ ಈಗಾಗಲೇ ಹಸಿಕಸ ಮತ್ತು ಒಣಕಸ ಎಂದು ಪ್ರತ್ಯೇಕಿಸಿ ಸಂಗ್ರಹಿಸಲಾಗುತ್ತಿದೆ; (ವಿವರ ನೀಡುವುದು) | ಕಲಬುರಗಿ ಜಿಲ್ಲೆಯ 261 ಹಾಗೂ ಯಾದಗಿರಿ ಜಿಲ್ಲೆಯ 122 ಗ್ರಾಮ ಪಂಚಾಯತಿಗಳಲ್ಲಿ ಪ್ರಸ್ತತ ಮನೆಗಳ ಹಂತದಲ್ಲಿ ಹಸಿಕಸ ಮತ್ತು ಒಣಕಸವನ್ನು ಪ್ರತ್ಯೇಕಿಸಲಾಗುತ್ತಿದ್ದು, ಪ್ರತಿ ಮನೆಯಿಂದ ಒಣಕಸವನ್ನು ಮಾತ್ರ ಸಂಗ್ರಹಿಸಿ ಸ್ವಚ್ಛ ಸಂಕೀರ್ಣಗಳ ಮೂಲಕ ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಕ್ರಮವಹಿಸಲಾಗುತ್ತಿದೆ. |
| (ಇ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಒಳಚರಂಡಿ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು) | ಸ್ವಚ್ಛ ಭಾರತ್ (ಗ್ರಾ) ಯೋಜನೆಯ ಹಂತ-2ರ ಮಾರ್ಗಸೂಚಿಯಂತೆ ಒಳಚರಂಡಿ ನಿರ್ಮಾಣ ಮಾಡಲು ಅವಕಾಶವಿರುವುದಿಲ್ಲ. ಬದಲಿಗೆ ಗ್ರಾಮಗಳಲ್ಲಿ ಬೂದು ನೀರು ನಿರ್ವಹಣೆಗೆ ಅವಕಾಶ ಕಲ್ಪಿಸಿದ್ದು, ಪ್ರಸ್ತುತ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ವಿಸ್ತೃತಾ ಯೋಜನಾ ವರದಿಗಳಿಗೆ ಅನುಮೋದನೆ ನೀಡಿ ಮೊದಲನೇ ಕಂತಿನ ಅನುದಾನ ಬಿಡುಗಡೆಗೊಳಿಸಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿದ್ದು, ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ. |

(ಪ್ರಿಯಾಂಕ್ ಖರ್ಗೆ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು